# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆ: 715/2023

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಈಶ್ವರಮ್ಮ | ಸಿಡಬ್ಲ್ಯೂ–7 |
| ಗಂಡನ ಹೆಸರು | – | ಮಹಲಿಂಗಪ್ಪ | ಪಿಡಬ್ಲ್ಯೂ–6 |
| ವಯಸ್ಸು | – | ಸು. 40 ವರ್ಷ | ಪ್ರ.ವ.ಬೋ ದಿನಾಂಕ:22.05.2025 |
| ಉದ್ಯೋಗ | – | ವ್ಯವಸಾಯ | |
| ವಾಸ | – | ಶಿವಗಂಗಾ ಗ್ರಾಮ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿಯವರಿಂದ:–**

1. ಸಾಕ್ಷಿಯು ನಿಪಿ–7 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು **ನಿಪಿ–7(ಬಿ)** ಎಂದು ಗುರುತಿಸಲಾಯಿತು. ನಿಪಿ–7 ಕ್ಕೆ ನಾನು ಒಂದು ವರ್ಷದ ಹಿಂದೆ ಅಬ್ಬಿನಹೊಳೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ನಿಪಿ–7 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ–ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ–ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ–ಸವಾಲು: ಮಾನ್ಯ ಎಪಿಪಿಯವರಿಂದ:–**

2. ದಿ:12.02.2023 ರಂದು ಅಬ್ಬಿನಹೊಳೆ ಪೋಲಿಸರು ಕೃತ್ಯ ನಡೆದ ಸ್ಥಳಕ್ಕೆ ನನ್ನನ್ನು ಮತ್ತು ಚಾಸಾ–8 ರವರನ್ನು ಬರಮಾಡಿಕೊಂಡು ಚಾಸಾ–6 ರವರು ತೋರಿಸಿದ ಸ್ಥಳದಲ್ಲಿ ನಿಪಿ–7 ರಂತೆ ಪಂಚನಾಮೆಯನ್ನು ಸಂಜೆ 5.30 ರಿಂದ 6.30 ರವರೆಗೆ ಜರುಗಿಸಿ ಆರೋಪಿತರು ಕೃತ್ಯಕ್ಕೆ ಬಳಸಿದ್ದ ಈಗ

ನ್ಯಾಯಾಲಯದ ಮುಂದೆ ಇರುವ ಹಾರೆ ಕೋಲನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ.ಆರ್ ಟಿ ಎಸ್ ವಕೀಲರಿಂದಃ**

ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.